ಕರ್ನಾಟಕ ಸರ್ಕಾರ
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ. DTE-ADMI0ACM2/8/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:17-11-2020.

**-:: ಸು ತ್ತೋಲೆ ::-**

**ವಿಷಯ:** 2020-21ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ **ಖಾಲಿ ಉಳಿದಿರುವ ಸೀಟುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ.DTE-ADMI0ACM2/8/2020, ದಿ:04-08-2020.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:02-09-2020, ದಿ:22-09-2020, 08-10-2020 17-10-2020 & 29-10-2020.
3. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ.DTE-ADMI0ACM2/19/2020, ದಿ:22-09-2020.
4. ಈ ಕಛೇರಿ ಸುತ್ತೋಲೆ ಸಂ. DTE-ADMI0ACM2/19/2020, ದಿ:17-10-2020.
5. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

-OOOOOO-

2020-21ನೇ ಸಾಲಿನ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪ್ರಥಮ ಸೆಮಿಸ್ಟರ್, ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ) ಪ್ರವೇಶಕ್ಕೆ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು ನಿಗದಿಪಡಿಸಿ ದಿನಾಂಕ:14-11-2020ರ ಒಳಗೆ ಆಯಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಹಂತದಲ್ಲಿ ಆಫ್-ಲೈನ್ ಮುಖಾಂತರ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಉಲ್ಲೇಖ(2)ರ ದಿನಾಂಕ:29-10-2020ರ ಸುತ್ತೋಲೆಗಳಲ್ಲಿ ಅನುಮತಿ ನೀಡಲಾಗಿತ್ತು.

ಅಂತಿಮ ದಿನಾಂಕದ ನಂತರವೂ ಭರ್ತಿ ಆಗದೆ ಖಾಲಿ ಉಳಿದಿರುವ ಸೀಟುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸಲು ಸಂಬಂಧಪಟ್ಟ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಮನವಿ ಕೋರಿರುವುದನ್ನು ಪರಿಶೀಲಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ, ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ)ನಲ್ಲಿ ಉಳಿಕೆಯಾಗಿರುವ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಪಡೆದು ನಿಯಮಗಳ ಪ್ರಕಾರ **ದಿ:30-11-2020 ರ ಒಳಗೆ ಸಾಮಾನ್ಯ ವರ್ಗದಡಿ ಆಫ್-ಲೈನ್ ಮುಖಾಂತರ** ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸಲು ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. **ಪ್ರಥಮ ಸೆಮಿಸ್ಟರ್ ಹಾಗೂ ತೃತೀಯ ಸೆಮಿಸ್ಟರ್(ಲ್ಯಾಟರಲ್ ಎಂಟ್ರಿ)ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

***ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.***

ಆಯುಕ್ತರು

*ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ* - ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:30-11-2020ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

<u>ಪ್ರತಿ ಮಾಹಿತಿಗಾಗಿ:-</u>

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ) ಇವರ ಆಪ್ತಶಾಖೆಗೆ.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಸಾರ್ವಜನಿಕ ಸಂಪರ್ಕಾಧಿಕಾರಿ, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಇ.ಆರ್.ಎಸ್ ವಿಭಾಗಕ್ಕೆ – ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
8. ಎಸ್.ಟಿ.ಎಲ್ ಮತ್ತು ಡಿವಿಪಿ(2) ವಿಭಾಗಕ್ಕೆ.
9. ಕಛೇರಿ ಪ್ರತಿ.